ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 28–10–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ವಾಜಪೇಯಿ ಆರೋಗ್ಯಶ್ರೀ ಯೋಜನೆ ಕುರಿತ ಪತ್ರಿಕಾಗೋಷ್ಠಿ:<br><br>ಶ್ರೀ ಯು.ಟಿ. ಖಾದರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು,<br><br>ಸಂಪರ್ಕ:<br><br>ಶ್ರೀ ಪ್ರವೀಣ್, ಮ್ಯಾನೇಜರ್,<br>ಮೊ. ನಂ. 9900060128<br>ಶ್ರೀ ಕೆ.ಪಿ. ಮಂಜಪ್ಪ,<br>ಹೆಲ್ತ್ ಕ್ಯಾಂಪ್,<br>ಮೊ. ನಂ. 7760999120 | 29–10–2014<br>ಬುಧವಾರ<br>ಅಪರಾಹ್ನ<br>12–00 ಗಂಟೆಗೆ | ಸಭಾಂಗಣ, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ , 4ನೇ ಮಹಡಿ, ಟಿ.ಟಿ.ಎಂ.ಸಿ. 'ಎ' ಬ್ಲಾಕ್, ಬಿ.ಎಂ.ಟಿ.ಸಿ. ಕಾಂಪ್ಲೆಕ್ಸ್, ಕೆ.ಹೆಚ್. ರಸ್ತೆ, ಶಾಂತಿ ನಗರ, ಬೆಂಗಳೂರು – 560 027 |
| 2 | ಒಡಂಬಡಿಕೆ ಕಾರ್ಯಕ್ರಮ:<br><br>ಸರ್ಕಾರಿ ಪಾಲಿಟೆಕ್ನಿಕ್ ಜೋಯಿಡಾ ಮತ್ತು ಟಯೋಟ ಸಂಸ್ಥೆ ನಡುವೆ<br><br>ಉಪಸ್ಥಿತಿ:<br><br>ಆರ್. ವಿ. ದೇಶಪಾಂಡೆ,<br>ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು | 29–10–2014<br>ಬುಧವಾರ<br>ಸಂಜೆ<br>4–30 ಗಂಟೆಗೆ | ಕೊಠಡಿ ಸಂಖ್ಯೆ 314,<br>ವಿಧಾನ ಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ನೂತನ ಆಯುಕ್ತರುಗಳ ಪ್ರಮಾಣ ವಚನ ಸ್ವೀಕಾರ

**ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ನೂತನ ಆಯುಕ್ತರುಗಳಿಗೆ ರಾಜ್ಯಪಾಲ ಶ್ರೀ ವಜುಭಾಯಿ ವಾಲ ಅವರು ಇಂದು ರಾಜಭವನದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಸರಳ ಸಮಾರಂಭದಲ್ಲಿ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.

ಇಂದು ರಾಜ್ಯ ಮಾಹಿತಿ ಆಯೋಗದ ನೂತನ ಆಯುಕ್ತರುಗಳಾಗಿ ಶ್ರೀ ಎಲ್. ಕೃಷ್ಣಮೂರ್ತಿ ಮತ್ತು ಶ್ರೀ ಶಂಕರ್ ಆರ್. ಪಾಟೀಲ್ ಅವರುಗಳು ಅಧಿಕಾರ ಹಾಗೂ ಗೌಪ್ಯತೆಯ ಪ್ರಮಾಣ ವಚನವನ್ನು ರಾಜ್ಯಪಾಲರಿಂದ ಸ್ವೀಕರಿಸಿದರು.

ಈ ಸಮಾರಂಭದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ, ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವ ಶ್ರೀ ಆರ್.ವಿ. ದೇಶಪಾಂಡೆ, ವಾರ್ತಾ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್, ಸಮಾಜ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ, ಮಾಜಿ ಮುಖ್ಯಮಂತ್ರಿ ಶ್ರೀ ಧರ್ಮಸಿಂಗ್, ಲೋಕಸಭಾ ಸದಸ್ಯರಾದ ಶ್ರೀ ಚಂದ್ರಪ್ಪ, ವಿಧಾನ ಪರಿಷತ್‌ಸದಸ್ಯರಾದ ಶ್ರೀ ಅಲ್ಲಮ ಪ್ರಭು ಪಾಟೀಲ್, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀ ಕೌಶಿಕ್ ಮುಖರ್ಜಿ ಮುಂತಾದವರು ಉಪಸ್ಥಿತರಿದ್ದರು.

ಸಮ:ಬಿಜಿಪಿ:ಕೆಎಂ:

## ಡಿಸೆಂಬರ್ 6 ರಂದು ರಾಷ್ಟ್ರೀಯ ಲೋಕ ಅದಾಲತ್

**ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಬರುವ ಡಿಸೆಂಬರ್ 6 ರಂದು ರಾಷ್ಟ್ರೀಯ ಲೋಕ ಅದಾಲತ್ ಏರ್ಪಡಿಸಲಾಗುತ್ತಿದೆ ಎಂದು ರಾಜ್ಯ ಉಚ್ಛ ನ್ಯಾಯಾಲಯದ ನ್ಯಾಯಮೂರ್ತಿಗಳೂ ಆದ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷ ನ್ಯಾಯಮೂರ್ತಿ ಶ್ರೀ ಎನ್. ಕೆ. ಪಾಟೀಲ್ ಅವರು ತಿಳಿಸಿದರು.

ಅವರು ಇಂದು ಬೆಂಗಳೂರು ಉಚ್ಛ ನ್ಯಾಯಾಲಯದ ಆವರಣದ ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯಲ್ಲಿ ಪತ್ರಕರ್ತರನ್ನುದ್ದೇಶಿಸಿ ಮಾತನಾಡುತ್ತಿದ್ದರು.

ಈ ಲೋಕ ಅದಾಲತ್‌ನಲ್ಲಿ ಮುನ್ಸಿಫ್ ನ್ಯಾಯಾಲಯದಿಂದ ಸುಪ್ರೀಂ ಕೋರ್ಟಿನ ವರೆಗೂ ಬಾಕಿ ಉಳಿದಿರುವ, ರಾಜಿ ಆಗಬಹುದಾದ ವ್ಯಾಜ್ಯಗಳನ್ನು ಇತ್ಯರ್ಥಪಡಿಸಲು ಅವಕಾಶವಿದೆ. ಇಚ್ಛೆಯುಳ್ಳವರು ಆಯಾ ನ್ಯಾಯಾಲಯಗಳನ್ನು, ಕಾನೂನು ಸೇವಾ ಸಮಿತಿ, ಕಾನೂನು ಸೇವಾ ಪ್ರಾಧಿಕಾರಗಳನ್ನು ಸಂಪರ್ಕಿಸಿ ತಮ್ಮ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದರು.

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರವು ಜನಸಾಮಾನ್ಯರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ವರ್ಷಕ್ಕೆ ಎರಡು ಬಾರಿ ದೇಶದಾದ್ಯಂತ ಲೋಕ ಅದಾಲತ್ ನಡೆಸಲು ತೀರ್ಮಾನಿಸಿದೆ. ಅದರಂತೆ ರಾಜ್ಯದಲ್ಲಿಯೂ ಲೋಕ ಅದಾಲತ್ ನಡೆಸಲಾಗುತ್ತಿದೆ ಎಂದು ವಿವರಿಸಿದರು. 2014ರ ಏಪ್ರಿಲ್ 12 ರಂದು ಮುಕ್ತಾಯಗೊಂಡ ಬೃಹತ್ ಲೋಕ ಅದಾಲತ್‌ನಲ್ಲಿ 2,25,663 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಇದರಿಂದಾಗಿ ನ್ಯಾಯಾಲಯ ಕಲಾಪದ 10 ವರ್ಷದ ಸಮಯ ಉಳಿದಂತಾಗಿದೆ ಎಂದು ಉಚ್ಛನ್ಯಾಯಾಲಯದ ಕಾನೂನು ಸೇವಾ ಸಮಿತಿ ಅಧ್ಯಕ್ಷ ನ್ಯಾಯಮೂರ್ತಿ ಶ್ರೀ ನಾರಾಯಣಸ್ವಾಮಿ ಅವರು ವಿವರಿಸಿದರು.

ಈ ಲೋಕ ಅದಾಲತ್‌ನಲ್ಲಿ ಸೌಹರ್ದಯುತವಾಗಿ ಬಗೆಹರಿಸಿಕೊಳ್ಳಬಹುದಾದ 22 ರೀತಿಯ ವ್ಯಾಜ್ಯಗಳನ್ನು ಕಾನೂನು ಸೇವಾ ಪ್ರಾಧಿಕಾರ ಗುರುತಿಸಿದೆ ಎಂದು ತಿಳಿಸಿದರು.

ವಿವಾದ/ಪ್ರಕರಣಗಳನ್ನು ಹೊಂದಿರುವ ಸಾರ್ವಜನಿಕರು ಎರಡನೇ ರಾಷ್ಟ್ರೀಯ ಲೋಕ ಅದಾಲತ್‌ನ ಪ್ರಯೋಜನ ಪಡೆಯುವುದಕ್ಕಾಗಿ ಜಿಲ್ಲಾ ಕೇಂದ್ರಗಳಲ್ಲಿರುವ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಗಳು ಪ್ರತಿ ತಾಲ್ಲೂಕಿನಲ್ಲಿರುವ ಕಾನೂನು ಸೇವೆಗಳ ಸಮಿತಿಗಳನ್ನು ಸಂಪರ್ಕಿಸುವಂತೆ ಮನವಿ ಮಾಡಿದರು.

ಎರಡನೇ ರಾಷ್ಟ್ರೀಯ ಲೋಕ ಅದಾಲತ್‌ನ ಪರಿಣಾಮಕಾರಿ ಕಾರ್ಯನಿರ್ವಹಣೆಗಾಗಿ ಸಾರ್ವಜನಿಕರು ಸರ್ಕಾರೇತರ ಸಂಸ್ಥೆಗಳು ಶಿಕ್ಷಣ ಸಂಸ್ಥೆಗಳು ಮತ್ತು ಸಾಮಾಜಿಕ ಕಾರ್ಯಕರ್ತರು ತಮ್ಮ ಸಲಹೆಗಳನ್ನು ಸದಸ್ಯ ಕಾರ್ಯದರ್ಶಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರಿಗೆ ಇ–ಮೇಲ್ karslsa@gmail.com ಸಲ್ಲಿಸಬಹುದು.

ಈ ಸಂದರ್ಭದಲ್ಲಿ " ಜನ ಸಾಮಾನ್ಯರಿಗೆ ಕಾನೂನು" ಪುಸ್ತಕವನ್ನು ಬಿಡುಗಡೆಗೊಳಿಸಿದ ನ್ಯಾಯಾಧೀಶರು ಈ ಪುಸ್ತಕ ಕೇವಲ ರೂ. 20/– ಗಳಿಗೆ ಲಭ್ಯವಿದ್ದು ಜನಸಾಮಾನ್ಯರಿಗೂ ಅರ್ಥವಾಗುವಂತಿದ್ದು ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಇದು ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಸಮ:ಕೆಎಂ:

## <u>ಕನ್ನಡದ ಪುಸ್ತಕ ಸೂಚಿಗೆ ಮಾಹಿತಿ ನೀಡಿ</u>

**ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)**

ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡದ ಪುಸ್ತಕಗಳ ಸೂಚಿಯೊಂದನ್ನು ಸಿದ್ದಪಡಿಸುತ್ತಿದೆ. ಅರ್ಜಿದಾರರು ತಾವು 2013 ರಲ್ಲಿ ಮೊದಲ ಮುದ್ರಣವಾಗಿ ಪ್ರಕಟಪಡಿಸಿದ ಪುಸ್ತಕಗಳ ತಲಾ ಒಂದು ಪ್ರತಿಯೊಂದಿಗೆ, ನಿಗದಿತ ಅರ್ಜಿ ನಮೂನೆಯನ್ನು ಭರ್ತಿಮಾಡಿ ಪ್ರಾಧಿಕಾರಕ್ಕೆ ಸಲ್ಲಿಸಬೇಕು.

ಪ್ರಾಧಿಕಾರವು ನಿಯಮಿಸುವ ತಜ್ಞರು ಆಯ್ಕೆ ಮಾಡಿದ ಪುಸ್ತಕಗಳನ್ನು, ಪಟ್ಟಿ ಮಾಡಿ ಸೂಕ್ತ ಸಂಕ್ಷಿಪ್ತ ಟಿಪ್ಪಣಿಯ ಪುಸ್ತಕದ ಮುಖಪುಟದೊಡನೆ ಪ್ರಾಧಿಕಾರದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಇದೊಂದು ದಾಖಲಾತಿ ಮಾತ್ರವಾಗಿದೆ. ಹಲವು ಸಂಘ ಸಂಸ್ಥೆಗಳಿಗೆ ಪುಸ್ತಕಗಳ ಆಯ್ಕೆ, ಖರೀದಿ, ಪುರಸ್ಕಾರಗಳಿಗೆ ಶಿಫಾರಸ್ಸು ಮುಂತಾದವುಗಳಿಗೂ ಉಪಯೋಗವಾಗುವುದು. ಪುನರ್ ಮುದ್ರಣಗೊಂಡ ಪುಸ್ತಕಗಳನ್ನು ಪ್ರತ್ಯೇಕ ಪಟ್ಟಿಯಲ್ಲಿ ಸೇರಿಸುವ ಕಾರಣದಿಂದ ಈ ಪಟ್ಟಿಯಲ್ಲಿ ಅವಕಾಶವಿರುವುದಿಲ್ಲ.

ಲೇಖಕರು ಅಥವಾ ಪ್ರಕಾಶಕರು, ಪುಸ್ತಕ ಮತ್ತು ಅರ್ಜಿಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇಲ್ಲಿಗೆ ಸಲ್ಲಿಸುವುದು.

ಅರ್ಜಿ ನಮೂನೆಯನ್ನು ಪ್ರಾಧಿಕಾರದ ವೆಬ್‌ಸೈಟ್ www.kannadapustakapradhikara.com ನಲ್ಲಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಿಲ್ಲೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30–11–2014 ಆಗಿದ್ದು, ಅನಂತರ ಬಂದ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಸ್ವೀಕರಿಸಲಾಗುವುದಿಲ್ಲ. ಯಾವುದೇ ಕಾರಣಕ್ಕೂ ಸಲ್ಲಿಸಲಾಗುವ ಪುಸ್ತಕಗಳನ್ನು ಪ್ರಾಧಿಕಾರವು ಹಿಂದಿರುಗಿಸುವುದಿಲ್ಲ.

ಸಮ:ಬಾಬು:ಜಿಪಿಆರ್.

## ಕಂದಾಯ ಗ್ರಾಮಗಳಾಗಿ ಲಂಬಾಣಿ ತಾಂಡಾ: ತಜ್ಞರ ಸಮಿತಿ ವರದಿ ಸಲ್ಲಿಕೆ

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)–

**ಲಂಬಾಣಿ ತಾಂಡಾಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸುವ ತಜ್ಞ ಸಮಾಲೋಚಕರ ಸಮಿತಿಯ ಅಧ್ಯಕ್ಷ ಶ್ರೀ ಕೆ. ನರಸಿಂಹಯ್ಯ ಅವರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವರದಿ ಸಲ್ಲಿಸಿದರು.**

**ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಬೇಕೆಂದು ಆಯವ್ಯಯದಲ್ಲಿ ಘೋಷಣೆ ಮಾಡಲಾಗಿದೆ. ಪಕ್ಷದ ಪ್ರಣಾಳಿಯಲ್ಲೂ ಭರವಸೆ ನೀಡಲಾಗಿತ್ತು. ಈಗ ತಜ್ಞರ ಸಮಿತಿಯು ವರದಿ ಸಲ್ಲಿಸಿದೆ. ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಉದ್ದೇಶದಿಂದ 1993ರಲ್ಲಿ ಕೆಲವು**

ಮಾನದಂಡಗಳನ್ನು ನಿಗದಿ ಪಡಿಸಿ ಆದೇಶ ಹೊರಡಿಸಲಾಗಿದೆ. ಆ ಯೋಜನೆ ಸಂಪೂರ್ಣ ಫಲಕಾರಿಯಾಗಿಲ್ಲ. ಇದಕ್ಕೆ ಕಾಯಕಲ್ಪ ಕೊಡಲೇ ಬೇಕು ಎಂಬ ಉದ್ದೇಶದಿಂದ ಈ ತಜ್ಞರ ಸಮಿತಿ ರಚಿಸಲಾಗಿತ್ತು.

ತಾಂಡಾಗಳು ಖಾಸಗಿ, ಗೋಮಾಳ ಮತ್ತು ಪಟ್ಟಾ ಭೂಮಿಗಳಲ್ಲಿ ಕೂಡ ನಿರ್ಮಾಣಗೊಂಡಿವೆ. ಅವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ಕಾನೂನಿನಲ್ಲಿ ಕೆಲವು ತೊಡಕುಗಳಿವೆ. ಇದಕ್ಕೆ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.

ತಾಂಡಾಗಳು ಜನ ವಸತಿ ಪ್ರದೇಶಗಳಾಗಿದ್ದು, ಈ ಕಂದಾಯ ಗ್ರಾಮಗಳಾಗಿ ಮಾರ್ಪಟ್ಟಿಲ್ಲ. ಹಾಗಾಗಿ ಸರ್ಕಾರಿ ಸೌಲಭ್ಯಗಳು ತಾಂಡಾಗಳಿಗೆ ಸಿಗುತ್ತಿಲ್ಲ. ಹಕ್ಕು ಪತ್ರ ಕೂಡ ಕೊಟ್ಟಿಲ್ಲ. ತಾಂಡಾದಲ್ಲಿ ವಾಸಿಸುವ ಜನರು ಸರ್ಕಾರಿ ಯೋಜನೆ, ಸೌಲಭ್ಯಗಳಿಂದ ವಂಚಿತರಾಗಬಾರದು ಎಂಬ ಆಶಯವನ್ನು ಮುಖ್ಯಮಂತ್ರಿಯವರು ವ್ಯಕ್ತಪಡಿಸಿದರು.

ವರದಿಯಲ್ಲಿನ ಎಲ್ಲ ಶಿಫಾರಸುಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಕ್ರಮ ಕೈಗೊಳ್ಳಲಾಗುವುದು ಎಂದ ಮುಖ್ಯಮಂತ್ರಿಗಳು ವರದಿಯ ಶಿಫಾರಸುಗಳ ಆಧಾರದ ಮೇಲೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ವರದಿ ಸಲ್ಲಿಸಿ ಮಾತನಾಡಿದ ಸಮಿತಿ ಅಧ್ಯಕ್ಷ ಶ್ರೀ ಕೆ. ನರಸಿಂಹಯ್ಯ ಅವರು ಸಮಿತಿಯು 20 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ, 50ಕ್ಕೂ ಹೆಚ್ಚು ತಾಂಡಾಗಳಿಗೆ ಭೇಟಿ ನೀಡಿ, ಜಿಲ್ಲಾಡಳಿತ, ಸಮಾಜದ ಮುಖಂಡರ ಜೊತೆ ಸಮಾಲೋಚಿಸಿ, ತಾಂಡಾಗಳಲ್ಲಿ ವಾಸ ಮಾಡುವವರ ಸಮಸ್ಯೆಗಳ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸಲಾಗಿದೆ ಎಂದರು.

ಅವರು ವಾಸ ಮಾಡುವ ಸ್ಥಳಗಳಿಗೆ ಹಕ್ಕು ಪತ್ರ ನೀಡಿ, ವರದಿಯಲ್ಲಿನ ಶಿಫಾರಸುಗಳನ್ನು ಜಾರಿಗೆ ತಂದಲ್ಲಿ, ತಾಂಡಾಗಳಲ್ಲಿ ವಾಸ ಮಾಡುತ್ತಿರುವ ಜನರ ಅಭಿವೃದ್ಧಿ ಸಾಧ್ಯ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್.ಕೆ. ಪಾಟೀಲ, ಸಮಾಜ ಕಲ್ಯಾಣ ಸಚಿವ ಶ್ರೀ ಎಚ್. ಆಂಜನೇಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್, ಮಾಜಿ ಸಚಿವೆ ಶ್ರೀಮತಿ ಬಿ.ಟಿ. ಲಲಿತಾ ನಾಯಕ್ ಹಾಗೂ ಶಾಸಕರು, ಸಮಿತಿಯ ಸದಸ್ಯರು ಹಾಜರಿದ್ದರು. ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಮುಖ್ಯಮಂತ್ರಿ ಆಪ್ತ ಕಾರ್ಯದರ್ಶಿ ಶ್ರೀ ಹೀರಾನಾಯ್ಕ ಉಪಸ್ಥಿತರಿದ್ದರು.

ಸಹನಾ

## 439 ಹೊಸ ಗ್ರಾ.ಪಂ.ಗಳ ರಚನೆ:
## ಪುನರ್‌ವಿಂಗಡಣಾ ಸಮಿತಿ ಶಿಫಾರಸು

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)-

ಗ್ರಾಮಪಂಚಾಯತ್ ಪುನರ್ ವಿಂಗಡಣಾ ಸಮಿತಿ ಅಧ್ಯಕ್ಷ ಮಾಜಿ ಶಾಸಕ ಎಸ್.ಜಿ. ನಂಜಯ್ಯನಮಠ ಅವರು ಇಂದು ಗ್ರಾಮ ಪಂಚಾಯಿತಿ ಪುನರ್ ವಿಂಗಡಣಾ ಸಮಿತಿ ವರದಿ 2014ನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದರು.

ವರದಿಯನ್ನು ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿಗಳು, ನಮ್ಮ ಪಕ್ಷ ಮತ್ತು ಸರ್ಕಾರ ಅಧಿಕಾರ ವಿಕೇಂದ್ರೀಕರಣಕ್ಕೆ ಬದ್ಧತೆ ಹೊಂದಿದೆ. ಪಂಚಾಯತ್ ರಾಜ್ ವ್ಯವಸ್ಥೆ ಬಲಗೊಳ್ಳಬೇಕು, ಜನರು ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಹಾಗೂ ಜನತಂತ್ರ ವಿಕೇಂದ್ರೀಕರಣವಾಗಬೇಕು ಹಾಗೂ ಸಾಮಾಜಿಕ ನ್ಯಾಯ ಸಿಗಬೇಕು ಎಂಬುದು ನಮ್ಮ ಸರ್ಕಾರದ ಮುಖ್ಯ ಉದ್ದೇಶ. ಈ ಸಮಿತಿಯು 30 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ, ವಿವಿಧ ಸಂಸ್ಥೆಗಳು, ಅಭಿವೃದ್ಧಿಯ ಎಲ್ಲ ಪಾಲುದಾರರು ಹಾಗೂ ರಾಜಕೀಯ ಮುಖಂಡರ ಜೊತೆ ಚರ್ಚಿಸಿ ವರದಿ ಸಲ್ಲಿಸಿದ್ದಾರೆ.

ವರದಿಯಲ್ಲಿ 439 ಗ್ರಾಮ ಪಂಚಾಯಿತಿಗಳನ್ನು ಹೆಚ್ಚುವರಿಯಾಗಿ ರಚಿಸುವಂತೆ ಸಲಹೆ ನೀಡಲಾಗಿದೆ. ಆಡಳಿತಾತ್ಮಕ ಮತ್ತು ಅಭಿವೃದ್ಧಿ ದೃಷ್ಟಿಯಿಂದ ಈ ವರದಿಯನ್ನು ಮುಂದಿನ ಗ್ರಾಮ ಪಂಚಾಯಿತಿ ಚುನಾವಣೆಗೆ ಮುನ್ನ ಜಾರಿಗೆ ತರಲಾಗುವುದು ಎಂದರು.

ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್.ಕೆ. ಪಾಟೀಲ, ಸಮಾಜ ಕಲ್ಯಾಣ ಸಚಿವ ಶ್ರೀ ಎಚ್. ಆಂಜನೇಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಉಪಸ್ಥಿತರಿದ್ದರು.

ಸಹನಾ

# ತಂಬಾಕು ಸೇವನೆಯಿಂದ ಆರ್ಥಿಕ ಹೊರೆ:
# ಮುಖ್ಯಮಂತ್ರಿಗೆ ವರದಿ ಸಲ್ಲಿಕೆ

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)–

ಕರ್ನಾಟಕದಲ್ಲಿ ತಂಬಾಕು ಸಂಬಂಧಿ ರೋಗಗಳಿಂದಾಗುತ್ತಿರುವ ಆರ್ಥಿಕ ಹೊರೆ ಕುರಿತ ವರದಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ. ಖಾದರ್ ಅವರು ಇಂದು ಮುಖ್ಯಮಂತ್ರಿಗಳಿಗೆ ಸಲ್ಲಿಸಿದರು. ವಿಶ್ವ ಆರೋಗ್ಯ ಸಂಸ್ಥೆ ಮತ್ತು ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯ ಹಾಗೂ ಕರ್ನಾಟಕ ಸರ್ಕಾರದ ಸಹಯೋಗದೊಂದಿಗೆ ಈ ವರದಿಯನ್ನು ಸಿದ್ಧಪಡಿಸಲಾಗಿದೆ.

ವರದಿ ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿಗಳು ತಂಬಾಕು ಸಂಬಂಧಿ ರೋಗಗಳಿಂದ ಹೃದಯ ಸಂಬಂಧಿ ರೋಗಗಳು, ಕ್ಯಾನ್ಸರ್, ಉಸಿರಾಟದ ತೊಂದರೆ, ಅಸ್ತಮಾ ಕಾಯಿಲೆಗಳು ಬರುತ್ತವೆ. ಈ

ರೋಗಗಳು ಬರದಂತೆ ತಡೆಗಟ್ಟುವುದೇ ಮುಖ್ಯವಾದ ಕೆಲಸವಾಗಬೇಕು. ರೋಗ ಬಂದ ನಂತರ ಕಾಯಿಲೆ ಗುಣಪಡಿಸುವುದು ತುಂಬಾ ಕಷ್ಟ ಎಂದರು.

ಕರ್ನಾಟಕ ರಾಜ್ಯವೊಂದರಲ್ಲೇ ಪ್ರತಿ ವರ್ಷ ಇಂತಹ ಕಾಯಿಲೆಗಳಿಗೆ 983 ಕೋಟಿ ರೂ. ವೆಚ್ಚವಾಗುತ್ತಿದೆ. 35 ರಿಂದ 69ರ ವಯೋಮಾನದವರ ಚಿಕಿತ್ಸೆಗಾಗಿ ಶೇ. 73ರಷ್ಟು ಹಣ ಖರ್ಚಾಗಿದೆ. ಜನರಲ್ಲಿ ಈ ರೋಗ ಬರದಂತೆ ಜಾಗೃತಿ ಮೂಡಿಸುವುದು ಅತಿ ಮುಖ್ಯ. ಸರ್ಕಾರ ಗುಟ್ಕಾವನ್ನು ನಿಷೇಧಿಸಿದ್ದರೂ, ತಂಬಾಕು ಮತ್ತು ಸಿಗರೇಟ್ ಸೇವನೆ ಗ್ರಾಮೀಣ ಭಾಗದಲ್ಲಿ ಉಳಿದುಕೊಂಡಿದೆ. ವರದಿಯ ಶಿಫಾರಸುಗಳ ಜಾರಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಸಹನಾ

## ಅಕ್ಟೋಬರ್ 29ರಂದು ವೈದ್ಯರ ಜೊತೆ ಮುಖ್ಯಮಂತ್ರಿ ಸಭೆ

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)–

ಅಕ್ಟೋಬರ್ 29ರಂದು ಮಧ್ಯಾಹ್ನ 3.30 ಕ್ಕೆ ವೈದ್ಯರ ಸಮಸ್ಯೆಗಳನ್ನು ಕುರಿತು ಚರ್ಚಿಸಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ ಕರೆಯಲಾಗಿದೆ.

ವೈದ್ಯರು ಮುಷ್ಕರ ನಿಲ್ಲಿಸಬೇಕು. ಮುಕ್ತವಾಗಿ ಕುಳಿತು ಚರ್ಚಿಸಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು. ರಾಜೀನಾಮೆ ಅಂಗೀಕಾರ ಮಾಡಿಲ್ಲ. ರೋಗಿಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳುವುದು ವೈದ್ಯರ ಕರ್ತವ್ಯ ಎಂದು ಮುಖ್ಯಮಂತ್ರಿಗಳು ಇಂದು ವಿವಿಧ ಸಮಿತಿಗಳ ವರದಿ ಸ್ವೀಕರಿಸಿದ ನಂತರ ಪತ್ರಕರ್ತರೊಂದಿಗೆ ಮಾತನಾಡುತ್ತ ತಿಳಿಸಿದರು.

ಸಹನಾ

## ಬಡವರಿಗೆ ನೆರವಾಗಿ: ಸರ್ಕಾರಿ ನೌಕರರಿಗೆ ಮುಖ್ಯಮಂತ್ರಿ

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)–

ಸರ್ಕಾರ ಮತ್ತು ಸರ್ಕಾರಿ ನೌಕರರು ಒಂದು ಕುಟುಂಬದ ಸದಸ್ಯರಂತೆ. ನಾವೆಲ್ಲರೂ ಒಟ್ಟಿಗೆ ಸೇರಿ, ಸಮಾಜದ ಕೆಲಸ ಮಾಡಬೇಕಾಗಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಿಳಿಸಿದರು.

ಕರ್ನಾಟಕ ಸರ್ಕಾರಿ ನೌಕರರ ಸಂಘ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇಂದು ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು ಬಡವರಿಗೆ ಸಹಾಯ ಮಾಡುವುದರಿಂದ ದೊರೆಯುವ ತೃಪ್ತಿ ಬೇರೆ ಯಾವುದರಿಂದಲೂ ಸಿಗುವುದಿಲ್ಲ. ಸರ್ಕಾರಿ ನೌಕರರು ಈ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸುವ ಮೂಲಕ ಬದುಕನ್ನು ಸಾರ್ಥಕ ಪಡಿಸಿಕೊಳ್ಳಬೇಕು ಎಂದರು.

ಸರ್ಕಾರಿ ನೌಕರರ ನ್ಯಾಯಯುತ ಬೇಡಿಕೆಗಳಿಗೆ ನಾನು ಯಾವತ್ತೂ ವಿರೋಧ ವ್ಯಕ್ತಪಡಿಸಿಲ್ಲ. ನ್ಯಾಯಯುತ ಬೇಡಿಕೆಗಳನ್ನು ನನ್ನ ಅಧಿಕಾರಾವಧಿಯಲ್ಲಿ ಈಡೇರಿಸಿದ್ದೇನೆ. ನಾನು ಕೆಲಸ ಮಾಡದ ಅಧಿಕಾರಿಗಳ ಮೇಲೆ ಒರಟಾಗಿ ಮಾತನಾಡಿರಬಹುದು/. ಆದರೆ ಯಾರ ಮೇಲೂ ಕೂಡ ವೈಯಕ್ತಿಕ ದ್ವೇಷ ಇಲ್ಲ. ನಮ್ಮ ಸರ್ಕಾರ ಸರ್ಕಾರಿ ನೌಕರರ ಜೊತೆ ಯಾವತ್ತೂ ಇರುತ್ತದೆ. ಇಬ್ಬರೂ ಸೇರಿ ಸಮಾಜಕ್ಕೆ ಒಳಿತನ್ನು ಮಾಡೋಣ ಎಂದರು.

ಸಚಿವರಾದ ಡಿ.ಕೆ. ಶಿವಕುಮಾರ್, ಮಾಜಿ ಸಚಿವ ಎಚ್.ಎಂ. ರೇವಣ್ಣ, ಸಾಹಿತಿ ನಲ್ಲೂರು ಪ್ರಸಾದ್ ಅವರು ಮಾತನಾಡಿದರು.

ಸಹನಾ

## ಅಭಿನಂದನಾ ಕಾರ್ಯಕ್ರಮ

ಬೆಂಗಳೂರು, ಅ. 28 (ಕರ್ನಾಟಕ ವಾರ್ತೆ)–

2014 ಮಾರ್ಚ್/ಏಪ್ರಿಲ್ ನಲ್ಲಿ ನಡೆದ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳಲ್ಲಿ 30 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿದ್ದು, ಶೇ. 100 ಫಲಿತಾಂಶ ಪಡೆದಂತಹ 526 ಸರ್ಕಾರಿ ಪ್ರೌಢಶಾಲೆಗಳು, 216 ಅನುದಾನಿತ ಪ್ರೌಢಶಾಲೆಗಳು, 815 ಅನುದಾನರಹಿತ ಪ್ರೌಢಶಾಲೆಗಳನ್ನು ಹಾಗೂ 6 ಸರ್ಕಾರಿ ಪದವಿಪೂರ್ವ ಕಾಲೇಜುಗಳು, 3 ಅನುದಾನಿತ ಪದವಿಪೂರ್ವ ಕಾಲೇಜುಗಳು ಮತ್ತು 16 ಅನುದಾನ ರಹಿತ ಪದವಿಪೂರ್ವ ಕಾಲೇಜುಗಳನ್ನು ಜಿಲ್ಲಾ ಮಟ್ಟದಲ್ಲಿ ನಡೆಯುವ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಸ್ಮರಣಿಕೆಗಳನ್ನು ನೀಡಿ ಪುರಸ್ಕರಿಸಲಾಗುವುದು. ಇದಲ್ಲದೆ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಿಗೆ ತಲಾ ರೂ. 10,000/ ಗಳ ವಿಶೇಷ ಪ್ರೋತ್ಸಾಹಧನ ನೀಡಲಾಗುವುದೆಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.